## ಕರ್ನಾಟಕ ಸರ್ಕಾರದ ನಡವಳಿ

138

**ವಿಷಯ:- ಸೇವೆಯಲ್ಲಿ ಒಂದೂ ಪದೋನ್ನತಿ ಇಲ್ಲದೆ 25 ಮತ್ತು 30 ವರ್ಷಗಳು ಅದೇ ಹುದ್ದೆಯಲ್ಲಿ ಮುಂದುವರಿದಿರುವ ಸರ್ಕಾರಿ ನೌಕರರಿಗೆ ಹೆಚ್ಚುವರಿ ವೇತನ ಬಡ್ತಿ ಮಂಜೂರು ಮಾಡುವ ಬಗ್ಗೆ.**

ಓದಲಾಗಿದೆ: ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 13 ಎಸ್‌ಆರ್‌ಪಿ 2002 ದಿನಾಂಕ 09-05-2002

ಪ್ರಸ್ತಾವನೆ:

ಮೇಲೆ ಓದಲಾದ ದಿನಾಂಕ 09-05-2002ರ ಸರ್ಕಾರಿ ಆದೇಶದನ್ವಯ, ಸದರಿ ಆದೇಶದ ಕಂಡಿಕೆ 6(ii) ರಲ್ಲಿ ನಮೂದಿಸಲಾಗಿರುವ ನೌಕರರನ್ನು ಹೊರತುಪಡಿಸಿ ರಾಜ್ಯ ವೇತನ ಶ್ರೇಣಿಗಳಲ್ಲಿನ ಮೊದಲ 11 ವೇತನ ಶ್ರೇಣಿಗಳಲ್ಲಿ ಯಾವುದೇ ಒಂದು ಹುದ್ದೆಯಲ್ಲಿ ಇಪ್ಪತ್ತು ವರ್ಷಗಳ ಕಾಲ ಒಂದೂ ಪದೋನ್ನತಿ ಪಡೆಯದೆ ಮುಂದುವರಿಯುವ ಸರ್ಕಾರಿ ನೌಕರನಿಗೆ ಆ ಹುದ್ದೆಗೆ ನಿಗಧಿಪಡಿಸಲಾದ ವೇತನ ಶ್ರೇಣಿಯಲ್ಲಿ ಅಥವಾ ಅವನು ಹೊಂದಿರುವ ಆಯ್ಕೆಕಾಲಿಕ ವೇತನ ಶ್ರೇಣಿಯಲ್ಲಿ ಅಥವಾ ಹಿರಿಯ ವೇತನ ಶ್ರೇಣಿಯಲ್ಲಿ ಆಯಾ ಪ್ರಕರಣದನ್ವಯ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ದಿನಾಂಕ 1-4-2002 ರಿಂದ ಜಾರಿಗೆ ಬರುವಂತೆ ಅಥವಾ ಇಪ್ಪತ್ತು ವರ್ಷಗಳ ಸೇವೆ ಪೂರ್ಣಗೊಳಿಸುವ ದಿನಾಂಕದಿಂದ ಇದರಲ್ಲಿ ಯಾವುದು ನಂತರವೋ ಆ ದಿನಾಂಕದಿಂದ ಮಂಜೂರು ಮಾಡಲು ಅವಕಾಶವಿರುತ್ತದೆ. ಪ್ರಸ್ತುತ ಈ ಸೌಲಭ್ಯವು ರಾಜ್ಯ ವೇತನ ಶ್ರೇಣಿಯಲ್ಲಿನ ಮೊದಲ 15 ವೇತನ ಶ್ರೇಣಿಯಲ್ಲಿರುವ ಸರ್ಕಾರಿ ನೌಕರರಿಗೆ ಲಭ್ಯವಿರುತ್ತದೆ.

2011ರ ಅಧಿಕಾರಿ ವೇತನ ಸಮಿತಿಯು ಸೇವೆಯಲ್ಲಿ ಒಂದೂ ಪದೋನ್ನತಿ ಇಲ್ಲದೆ ಇಪ್ಪತ್ತೈದು ವರ್ಷಗಳ ಕಾಲ ಅದೇ ಹುದ್ದೆಯಲ್ಲಿ ಮುಂದುವರಿಯುವ ಸರ್ಕಾರಿ ನೌಕರನಿಗೆ 2ನೇ ಹೆಚ್ಚುವರಿ ವೇತನ ಬಡ್ತಿಯ ಸೌಲಭ್ಯವನ್ನು ಹಾಗೂ ಮೂವತ್ತು ವರ್ಷಗಳ ಕಾಲ ಒಂದೂ ಪದೋನ್ನತಿ ಪಡೆಯದೆ ಮುಂದುವರೆಯುವ ಸರ್ಕಾರಿ ನೌಕರನಿಗೆ 3ನೇ ಹೆಚ್ಚುವರಿ ವೇತನ ಬಡ್ತಿಯ ಸೌಲಭ್ಯವನ್ನು ಮಂಜೂರು ಮಾಡಲು ಮಾಡಿರುವ ಶಿಫಾರಸ್ಸನ್ನು ಸರ್ಕಾರವು ಒಪ್ಪಿಕೊಂಡಿರುತ್ತದೆ ಮತ್ತು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 12 ಎಸ್‌ಆರ್‌ಪಿ 2012 (VIII)**
**ಬೆಂಗಳೂರು, ದಿನಾಂಕ 14ನೇ ಜೂನ್ 2012**

ಕಂಡಿಕೆ 6(ii) ರಲ್ಲಿ ನಮೂದಿಸಲಾಗಿರುವ ನೌಕರರನ್ನು ಹೊರತುಪಡಿಸಿ ರಾಜ್ಯ ವೇತನ ಶ್ರೇಣಿಗಳಲ್ಲಿನ ಮೊದಲ 15 ಶ್ರೇಣಿಗಳಲ್ಲಿರುವ ಯಾವುದೇ ಒಂದು ಹುದ್ದೆಯಲ್ಲಿ ಇಪ್ಪತ್ತೈದು ವರ್ಷಗಳ ಕಾಲ ಒಂದೂ ಪದೋನ್ನತಿ ಪಡೆಯದೆ ಮುಂದುವರಿದಿರುವ ಅಥವಾ ಮುಂದುವರಿಯುವ ಸರ್ಕಾರಿ ನೌಕರನಿಗೆ ಆ ಹುದ್ದೆಗೆ ನಿಗದಿಪಡಿಸಲಾದ ವೇತನ ಶ್ರೇಣಿಯಲ್ಲಿ ಅಥವಾ ಅವನು ಹೊಂದಿರುವ ಆಯ್ಕೆಕಾಲಿಕ ವೇತನ ಶ್ರೇಣಿಯಲ್ಲಿ ಅಥವಾ ಹಿರಿಯ ವೇತನ ಶ್ರೇಣಿಯಲ್ಲಿ, ಆಯಾ ಪ್ರಕರಣಕ್ಕನ್ವಯ, **2ನೇ ಹೆಚ್ಚುವರಿ ವೇತನ ಬಡ್ತಿಯನ್ನು ದಿನಾಂಕ 1ನೇ ಏಪ್ರಿಲ್ 2012** ರಿಂದ ಜಾರಿಗೆ ಬರುವಂತೆ ಅಥವಾ 25 ವರ್ಷಗಳ ಸೇವೆ ಪೂರ್ಣಗೊಳಿಸಿದ ದಿನಾಂಕದಿಂದ, ಇದರಲ್ಲಿ ಯಾವುದು ನಂತರವೋ, ಆ ದಿನಾಂಕದಿಂದ ಮಂಜೂರು ಮಾಡಲು ಸರ್ಕಾರವು ಹರ್ಷಿಸುತ್ತದೆ.

2. ಕಂಡಿಕೆ 6(ii) ರಲ್ಲಿ ನಮೂದಿಸಲಾಗಿರುವ ನೌಕರರನ್ನು ಹೊರತುಪಡಿಸಿ ರಾಜ್ಯ ವೇತನ ಶ್ರೇಣಿಗಳಲ್ಲಿನ ಮೊದಲ 15 ಶ್ರೇಣಿಗಳಲ್ಲಿರುವ ಯಾವುದೇ ಒಂದು ಹುದ್ದೆಯಲ್ಲಿ ಮೂವತ್ತು ವರ್ಷಗಳ ಕಾಲ ಒಂದೂ ಪದೋನ್ನತಿ ಪಡೆಯದೆ ಮುಂದುವರಿದಿರುವ ಅಥವಾ ಮುಂದುವರಿಯುವ ಸರ್ಕಾರಿ ನೌಕರನಿಗೆ ಆ ಹುದ್ದೆಗೆ ನಿಗದಿಪಡಿಸಲಾದ ವೇತನ ಶ್ರೇಣಿಯಲ್ಲಿ ಅಥವಾ ಅವನು ಹೊಂದಿರುವ ಆಯ್ಕೆಕಾಲಿಕ ವೇತನ ಶ್ರೇಣಿಯಲ್ಲಿ ಅಥವಾ ಹಿರಿಯ ವೇತನ ಶ್ರೇಣಿಯಲ್ಲಿ, ಆಯಾ ಪ್ರಕರಣಕ್ಕನ್ವಯ, **3ನೇ ಹೆಚ್ಚುವರಿ ವೇತನ ಬಡ್ತಿಯನ್ನು ದಿನಾಂಕ 1ನೇ ಏಪ್ರಿಲ್ 2012** ರಿಂದ ಜಾರಿಗೆ ಬರುವಂತೆ ಅಥವಾ 30 ವರ್ಷಗಳ ಸೇವೆ ಪೂರ್ಣಗೊಳಿಸಿದ ದಿನಾಂಕದಿಂದ, ಇದರಲ್ಲಿ ಯಾವುದು ನಂತರವೋ, ಆ ದಿನಾಂಕದಿಂದ ಮಂಜೂರು ಮಾಡಲು ಸರ್ಕಾರವು ಹರ್ಷಿಸುತ್ತದೆ.